# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ, ವಾರ್ಡ್ ಸಮಿತಿ /ಸಹಾಯಕ ಇಂಜಿನಿಯರ್‌ರವರ ಕಛೇರಿ, ಶಂಕರಮಠ ವಾರ್ಡ್ ಸಂಖ್ಯೆ: 75,
15ನೇ ಮುಖ್ಯರಸ್ತೆ, 4ನೇ ಅಡ್ಡರಸ್ತೆ, ಕಿರ್ಲೋಸ್ಕರ್ ಕಾಲೋನಿ, 3ನೇ ಹಂತ, ಬೆಂಗಳೂರು-79.

---

ಸಂಖ್ಯೆ: ವಾ-75/ವಾ.ಸ./ಸಭಾನಡವಳಿ-15/2021-22 ದಿನಾಂಕ: 08/11/2021

## -:ಸಭೆಯ ನಡವಳಿಗಳು:-

ಮಾನ್ಯ ನೋಡಲ್ ಅಧಿಕಾರಿಯವರ ಆದೇಶದಂತೆ, ದಿನಾಂಕ: 08/11/2021 ಸೋಮವಾರದಂದು ಬೆಳಿಗ್ಗೆ 11.30 ಘಂಟೆಗೆ ವಾರ್ಡ್-75 ಶಂಕರಮಠದ ವಾರ್ಡ್ ಮಟ್ಟದ ಸಮಿತಿ ಸಭೆಯನ್ನು ಆಯೋಜಿಸಲಾಯಿತು.

ಶ್ರೀ ಬೆನಕೇಶ್ ಆರ್. ವಾರ್ಡ್ ಸಮಿತಿಯ, ಕಾರ್ಯದರ್ಶಿಗಳು ರವರು ಸಭೆಯನ್ನು ನಡೆಸುತ್ತಾ, ಸಾರ್ವಜನಿಕರ ಕುಂದು ಕೊರತೆಗಳು ಹಾಗೂ ವಾರ್ಡ್ ಅಭಿವೃದ್ಧಿಗೆ ಸಂಭಂಧಿಸಿದಂತೆ ಹಾಗೂ ಕೋವಿಡ್-19 ವೈರಸ್‌ನ ಸೋಂಕಿನ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹಾಗೂ ಸಾರ್ವಜನಿಕರ ಹಿತರಕ್ಷಣೆಗಾಗಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಯಲ್ಲಿ ಉಪಸ್ಥಿತರಾಗಿರುವ ಮಾನ್ಯ ನೋಡಲ್ ಅಧಿಕಾರಿಯವರಿಗೆ ಮತ್ತು ಸಭೆಗೆ ಆಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಶ್ರೀ ಬೆನಕೇಶ್ ಆರ್. ರವರು ಸಭೆಗೆ ಸ್ವಾಗತ ಕೋರುತ್ತಾ, ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು.

**ಸಭೆಯಲ್ಲಿ ಹಾಜರಿದ್ದವರು:-**

| | |
|---|---|
| 1 | ಶ್ರೀ. ಎಲ್. ಸುರೇಶ್, ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್-75, ಬಿಬಿಎಂಪಿ |
| 2 | ಶ್ರೀ ಬೆನಕೇಶ್ ಆರ್. ಸಮಿತಿ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು, ವಾರ್ಡ್-75, ಬಿಬಿಎಂಪಿ |
| 3 | ಶ್ರೀ ಎಸ್. ಲೋಕೇಶ್, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-75, ಬಿಬಿಎಂಪಿ. |
| 4 | ಶ್ರೀ ಸಿದ್ದರಾಮೇಶ್ವರ್, ಕಂದಾಯ ಪರಿವಿಕ್ಷಕರು, ವಾರ್ಡ್-75, ಶಂಕರಮಠ, ಬಿಬಿಎಂಪಿ. |
| 5 | ಶ್ರೀ ಸುನೀಲ್ ಕುಮಾರ್, ಕಂದಾಯ ಪರಿವಿಕ್ಷಕರು, ವಾರ್ಡ್-75, ಶಂಕರಮಠ, ಬಿಬಿಎಂಪಿ. |
| 6 | ಶ್ರೀ ಚನ್ನವೀರಯ್ಯ, ಹೆಡ್ ಗ್ಯಾಂಗ್‌ಮನ್, ಕಾಮಗಾರಿ ವಿಭಾಗ, ವಾರ್ಡ್-75, ಬಿಬಿಎಂಪಿ. |
| 7 | ಶ್ರೀ ಗಿರೀಶ್ ಬಿ., ಕಾಮಗಾರಿ ಪರಿವೀಕ್ಷಕರು, ಎನ್.ಡಬ್ಲ್ಯು-1 ಉಪವಿಭಾಗ, ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 8 | ಶ್ರೀ ಎನ್. ಮಂಜುನಾಥ್, ಮೇಸ್ತ್ರಿ, ತೋಟಗಾರಿಕೆ ವಿಭಾಗ, ವಾರ್ಡ್-75, ಬಿಬಿಎಂಪಿ. |
| 9 | ಶ್ರೀ ಎನ್. ರಮೇಶ್, ಮೇಸ್ತ್ರಿ, ಘನತ್ಯಾಜ್ಯ ನಿರ್ವಹಣೆ ವಿಭಾಗ, ವಾರ್ಡ್-75, ಬಿಬಿಎಂಪಿ. |
| 10 | ಶ್ರೀ ಧನುಷ್ ಎ. ಆರೋಗ್ಯ ಸಂದರ್ಶಕರು, ವಾರ್ಡ್-75, ಬಿಬಿಎಂಪಿ. |
| 11 | ಶ್ರೀ ರಾಜೇಶ್, ವಾರ್ಡ್ ಮಾರ್ಷಲ್, ವಾರ್ಡ್-75, ಬಿಬಿಎಂಪಿ. |
| 12 | ಶ್ರೀ ದೇವರಾಜು, ಬೀದಿ ದೀಪಗಳ ನಿರ್ವಹಣೆ ಗುತ್ತಿಗೆದಾರರು, ವಾರ್ಡ್-75 |
| 13 | ಶ್ರೀ ಕೇಶವ ರೆಡ್ಡಿ, ಎ.ಎಸ್.ಐ. ಬಸವೇಶ್ವರನಗರ ಪೊಲೀಸ್ ಠಾಣೆ. |
| 14 | ಶ್ರೀ ಬಸವರಾಜ್ ಬಿ ದೇಸಾಯಿ, ಹೆಡ್ ಕಾನ್ಸ್‌ಟೇಬಲ್, ಬಸವೇಶ್ವರನಗರ ಪೊಲೀಸ್ ಠಾಣೆ. |
| 15 | ಶ್ರೀ ಸಿದ್ದರಾಜು ಸೋಸಲೆ, ವಾರ್ಡ್‌ನ ನಾಗರೀಕರು, ವಾರ್ಡ್-75. |

ಮು.ತಿ.ನೋ.

Scanned by CamScanner

**ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:-**

1. **ಆರೋಗ್ಯ ಇಲಾಖೆ ಮತ್ತು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-**
   - ಮಾನ್ಯ ನೋಡಲ್ ಅಧಿಕಾರಿಯವರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಮಾತನಾಡುತ್ತಾ, ವಾರ್ಡ್-75 ಶಂಕರಮಠದಲ್ಲಿ ಕೋವಿಡ್-19ಗೆ ಸಂಭಂಧಿಸಿದಂತೆ ಮಾಹಿತಿಗಳ ವಿವರಣೆ ನೀಡುವಂತೆ ಸಭೆಯಲ್ಲಿ ತಿಳಿಸಿದರು.
   - ಶ್ರೀ ಲೋಕೇಶ್, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-75 ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಹೊಸದಾಗಿ ಸ್ಥಾಪಿಸಲಾದ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಪ್ರತೀ ದಿನ ವ್ಯಾಕ್ಸಿನೇಷನ್ ನೀಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ಓ.ಪಿ.ಡಿ. ಪ್ರಾರಂಭಿಸಲಾಗುವುದು ಆದುದರಿಂದ ಆಸ್ಪತ್ರೆಯ ಮಾರ್ಗಸೂಚಿಯನ್ನು ಅಳವಡಿಸಿ ಸಾರ್ವಜನಿಕರಿಗೆ ಉಪಯುಕ್ತವಾಗುವಂತೆ ಮಾಡಬೇಕಾಗಿ ಸಭೆಯಲ್ಲಿ ತಿಳಿಸಿದರು.
   - ಮಾನ್ಯ ನೋಡೆಲ್ ಅಧಿಕಾರಿ ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಎಲ್ಲಾ ಸಾರ್ವಜನಿಕರಿಗೆ ವ್ಯಾಕ್ಸಿನೇಷನ್ ದೊರಕುವಂತೆ ಮಾಡುವುದು ಹಾಗೂ ಮಾರ್ಗಸೂಚಿಯನ್ನು ಅಳವಡಿಸಲು ಸೂಕ್ತ ಕ್ರಮ ವಹಿಸಬೇಕಾಗಿ ಸಭೆಯಲ್ಲಿ ತಿಳಿಸಿದರು

2. **ಅಭಿಯಂತರರ ವಿಭಾಗದ ಬಗ್ಗೆ:-**
   - ಮಾನ್ಯ ನೋಡೆಲ್ ಅಧಿಕಾರಿಯವರು ಮಾತನಾಡುತ್ತಾ, ಮಳೆಕಾಲವಾದ್ದರಿಂದ ವಾರ್ಡ್ ವ್ಯಾಪ್ತಿಯಲ್ಲಿನ ಹೆಚ್ಚಾಗಿ ನೀರು ಹರಿಯುವ ಸ್ಥಳಗಳಲ್ಲಿನ ಚರಂಡಿಗಳಲ್ಲಿ ಹೂಳು ತೆರವುಗೊಳಿಸುವ ಕೆಲಸವನ್ನು ಶೀಘ್ರವಾಗಿ ಕೈಗೊಳ್ಳಬೇಕಾಗಿ ಸಹಾಯಕ ಅಭಿಯಂತರರಿಗೆ ಸಭೆಯಲ್ಲಿ ಹೇಳಿದರು.
   - ಸಹಾಯಕ ಅಭಿಯಂತರರು ಮಾತನಾಡುತ್ತಾ, ಈಗಾಗಲೇ ವಾರ್ಡ್ ಪರಿವೀಕ್ಷಣೆ ನಡೆಸಿ ವಾರ್ಡ್ ವ್ಯಾಪ್ತಿಯಲ್ಲಿನ ಹೆಚ್ಚಾಗಿ ಪ್ರವಾಹ ಉಂಟಾಗುವ ಸ್ಥಳಗಳನ್ನು ಗುರುತಿಸಿ ಈಗಾಗಲೇ ಜೆ.ಸಿ.ನಗರದ 15ನೇ ಮುಖ್ಯರಸ್ತೆ, 19ನೇ ಮುಖ್ಯರಸ್ತೆ ಹಾಗೂ 18ನೇ ಮುಖ್ಯರಸ್ತೆಗಳಲ್ಲಿನ ಚರಂಡಿಯ ಹೂಳನ್ನು ತೆರವುಗೊಳಿಸಲಾಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದರು.

3. **ವಿದ್ಯುತ್ ವಿಭಾಗದ ಬಗ್ಗೆ:-**
   - ಶ್ರೀ ಗಣೇಶ್, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, 6ನೇ ಅಡ್ಡರಸ್ತೆಯಲ್ಲಿ ಬೀದಿ ದೀಪಗಳು ಕಾರ್ಯ ನಿರ್ವಹಿಸುತ್ತಿರುವುದಿಲ್ಲ ಎಂದು ಸಭೆಯಲ್ಲಿ ದೂರು ನೀಡಿದರು.
   - ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಹಿಂದಿನ ಸಭೆಯಲ್ಲಿ ಶ್ರೀ ಸಿದ್ದರಾಜು ಸೋಸಲೆ ಹಾಗೂ ವಾಟ್ಸ್‌ಆಪ್ ಗ್ರೂಪ್‌ನಲ್ಲಿ ಶ್ರೀ ಸುಬ್ರಮಣಿ ವಾರ್ಡ್‌ನ ನಾಗರೀಕರು ರವರು ವಾರ್ಡ್ ವ್ಯಾಪ್ತಿಯ ಕೆಲವು ರಸ್ತೆಗಳಲ್ಲಿ ಬೀದಿ ದೀಪಗಳ ನಿರ್ವಹಣೆಯನ್ನು ಸರಿಯಾಗಿ ನಿರ್ವಹಿಸುತ್ತಿರುವುದಿಲ್ಲವಾಗಿ ದೂರಿರುತ್ತಾರೆ ಸದರಿ ದೂರಿನ ವಿಷಯವಾಗಿ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ವಿವರಿಸುವಂತೆ ಸಭೆಯಲ್ಲಿ ತಿಳಿಸಿದರು.
   - ಶ್ರೀ ದೇವರಾಜು, ಬೀದಿ ದೀಪಗಳ ನಿರ್ವಹಣೆ ಗುತ್ತಿಗೆದಾರರು ರವರು ಮಾತನಾಡುತ್ತಾ, ಈಗಾಗಲೇ ಎಲ್ಲಾ ದೂರುಗಳ ವಿಷಯವಾಗಿ ಸ್ಥಳ ಪರಿಶೀಲಿಸಲಾಗಿದ್ದು, ಈಗಾಗಲೇ ಸರಿಪಡಿಸಿರುವುದಾಗಿ ಸಭೆಯಲ್ಲಿ ತಿಳಿಸಿದರು.

4. **ಪಶುಪಾಲನೆ ವಿಭಾಗದ ಬಗ್ಗೆ:-**
   - ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ನಾಯಿಗಳು ಹೆಚ್ಚಾಗಿದ್ದು ಈ ಬಗ್ಗೆ ಸಾರ್ವಜನಿಕರಿಂದ ದೂರುಗಳು ಹೆಚ್ಚಾಗುತ್ತಿರುತ್ತದೆ, ಆದುದರಿಂದ ಬೀದಿ ನಾಯಿಗಳಿಗೆ ರೇಬಿಸ್ ವ್ಯಾಕ್ಸಿನೇಷನ್ ಅಳವಡಿಸಲು ಸೂಕ್ತ ಕ್ರಮವಹಿಸುವಂತೆ ಹಿರಿಯ ವೆಟರಿನರಿ ಪರಿವೀಕ್ಷಕರು ರವರಿಗೆ ತಿಳಿಸಲು ಸಭಾ ಕಾರ್ಯದರ್ಶಿ ರವರಿಗೆ ಹೇಳಿದರು.

5. **ಕಂದಾಯ ವಿಭಾಗದ ಬಗ್ಗೆ:-**
   - ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಎಂದಿನಂತೆ ವಾರ್ಡ್ ವ್ಯಾಪ್ತಿಯಲ್ಲಿ ಸಂಗ್ರಹವಾದ ಕಂದಾಯದ ಮೊತ್ತ ಹಾಗೂ ಕಂದಾಯ ಸಂಗ್ರಹಣೆಗಾಗಿ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ವರದಿ ನೀಡುವಂತೆ ಕಂದಾಯ ಪರಿವೀಕ್ಷಕರು ವಾರ್ಡ್-75 ರವರಿಗೆ ತಿಳಿಸಿದರು.

ಪು.ತಿ.ನೋ.

Scanned by CamScanner

- ಶ್ರೀ ಸುನೀಲ್ ಕುಮಾರ್, ಕಂದಾಯ ಪರಿವೀಕ್ಷಕರು, ವಾಡ್-75 ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಸರಿಯಾದ ರೀತಿಯಲ್ಲಿ ಕಂದಾಯ ಸಂಗ್ರಹಣೆಯಾಗುತ್ತಿದ್ದು, 01-ಏಪ್ರಿಲ್-2021 ರಿಂದ 07-ನವೆಂಬರ್-2021ರ ವರೆಗೆ ಬಾಕಿ ಹಾಗೂ ಪ್ರಸ್ತುತ ಸಾಲಿನ ಒಟ್ಟು ಮೊತ್ತ ರೂ. 4.43 ಕೋಟಿಗಳಷ್ಟು ಕಂದಾಯ ಸಂಗ್ರಹವಾಗಿರುವುದಾಗಿ ತಿಳಿಸುತ್ತಾ, ಕಂದಾಯದ ವಿವರಗಳನ್ನು ಸಭೆಯಲ್ಲಿ ಸಲ್ಲಿಸಿದರು.

6. <u>ಘನತ್ಯಾಜ್ಯ ನಿರ್ವಹಣೆ ವಿಭಾಗದ ಬಗ್ಗೆ:-</u>

- ಶ್ರೀ ಸಿದ್ದರಾಜು, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ಭಾಗ್ಯದ ಬಾಗಿಲು ರಸ್ತೆ ಮತ್ತು ಕಿರ್ಲೋಸ್ಕರ್ ಕಾಲೋನಿ 15ನೇ ಮುಖ್ಯರಸ್ತೆಯ ಟ್ರಾನ್ಸ್‌ಫಾರ್ಮರ್ ಬಳಿಯಲ್ಲಿ ಹೆಚ್ಚಾಗಿ ಕಸ ಬೀಳುತ್ತಿರುವುದಾಗಿ ಸಭೆಯಲ್ಲಿ ದೂರಿದರು.
- ಶ್ರೀ ರಮೇಶ್, ಮೇಸ್ತ್ರಿ, ಘನತ್ಯಾಜ್ಯ ವಿಭಾಗ, ವಾರ್ಡ್-75 ರವರು ಮಾತನಾಡುತ್ತಾ, ಈಗಾಗಲೇ ಸ್ಥಳ ಪರೀಶೀಲಿಸಲಾಗಿದ್ದು ಪ್ರತಿ ನಿತ್ಯ ಸಾರ್ವಜನಿಕರು ಕಸವನ್ನು ಎಸೆಯುತ್ತಿರುತ್ತಾರೆ. ಪ್ರತಿ ನಿತ್ಯ ಸದರಿ ಸ್ಥಳಗಳಲ್ಲಿ ಕಸವನ್ನು ತೆರವುಗೊಳಿಸಲಾಗುತ್ತಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿರುವ ಎಲ್ಲಾ ಬ್ಲಾಕ್ ಸ್ಪಾಟ್‌ಗಳಲ್ಲಿ ಗಸ್ತು ತಿರುಗಿ ಕಸ ಹಾಕುವುದು ಕಂಡುಬಂದಲ್ಲಿ ಸ್ಥಳದಲ್ಲಿ ದಂಡ ವಿಧಿಸಿ ಸೂಕ್ತ ಕ್ರಮವಹಿಸಬೇಕಾಗಿ ಸಭೆಯಲ್ಲಿ ಹಾಜರಿದ್ದ ಶ್ರೀ ರಾಜೇಶ್, ಮಾರ್ಷಲ್, ವಾರ್ಡ್-75, ಬಿಬಿಎಂಪಿ ರವರಿಗೆ ಸಭೆಯಲ್ಲಿ ತಿಳಿಸಿದರು.

7. <u>ತೋಟಗಾರಿಕೆ ವಿಭಾಗದ ಬಗ್ಗೆ:-</u>

- ಶ್ರೀ ಸಿದ್ದರಾಜು ಸೋಸಲೆ ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ಪೈಪ್‌ಲೈನ್ ಉದ್ಯಾನವನ ಹಾಗೂ ಕೆಂಪೇಗೌಡ ಉದ್ಯಾನವನಗಳನ್ನು ಸರಿಯಾಗಿ ನಿರ್ವಹಣೆ ಮಾಡುತ್ತಿರುವುದಿಲ್ಲವೆಂದು ಸಭೆಯಲ್ಲಿ ದೂರಿದರು.
- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿರುವ ಎಲ್ಲಾ ಉದ್ಯಾನವನಗಳಲ್ಲಿ ಯಾವುದೇ ದೂರುಗಳು ಬಾರದಂತೆ ಸೂಕ್ತ ಕ್ರಮವಹಿಸಬೇಕಾಗಿ ಸಭೆಯಲ್ಲಿ ಹಾಜರಿದ್ದ ಶ್ರೀ ಮಂಜುನಾಥ್, ಮೇಸ್ತ್ರಿ, ತೋಟಗಾರಿಕೆ ಇಲಾಖೆ ರವರಿಗೆ ಸಭೆಯಲ್ಲಿ ತಿಳಿಸಿದರು.

8. <u>ಬಿ.ಡಬ್ಲ್ಯೂ.ಎಸ್.ಎಸ್.ಬಿ. ವಿಭಾಗದ ಬಗ್ಗೆ:-</u>

- ಶ್ರೀ ಸಿದ್ದರಾಜು ಸೋಸಲೆ ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ಅನುಪಮ ಶಾಲೆಯ ಹಿಂಭಾಗದಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ. ಇಲಾಖೆ ವತಿಯಿಂದ ರಸ್ತೆಯನ್ನು ಅಗೆಯುತ್ತಿರುವುದಾಗಿ ವಾಟ್ಸ್‌ಆಪ್ ಗ್ರೂಪ್‌ನಲ್ಲಿ ದೂರು ಸಲ್ಲಿಸಿರುವುದಾಗಿ ಸಭೆಯಲ್ಲಿ ದೂರಿದರು.
- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ. ಇಲಾಖೆ ವತಿಯಿಂದ ರಸ್ತೆಯನ್ನು ಅಗೆಯುವ ಮುನ್ನ ಸಂಭಂಧಿಸಿದ ಮಂಜೂರಾತಿ ಪತ್ರದೊಂದಿಗೆ ಬಿಬಿಎಂಪಿ ಅಧಿಕಾರಿಗಳಿಗೆ ಮಾಹಿತಿ ನೀಡಿ ನಂತರದಲ್ಲಿ ಕಾರ್ಯನಿರ್ವಹಿಸಬೇಕಾಗಿ ತಿಳಿಸಿ ಪತ್ರ ಬರೆಯುವಂತೆ ಕಾರ್ಯದರ್ಶಿ ರವರಿಗೆ ಸಭೆಯಲ್ಲಿ ತಿಳಿಸಿದರು.

9. <u>ಬೆಸ್ಕಾಂ ವಿಭಾಗದ ಬಗ್ಗೆ:-</u>

- ಸಹಾಯಕ ಅಭೀಯಂತರರು ವಾರ್ಡ್-75 ರವರು ಮಾತನಾಡುತ್ತಾ, ಪೈಪ್‌ಲೈನ್ ರಸ್ತೆಯಲ್ಲಿ ಹಾಗೂ ಜೆ.ಸಿ.ನಗರದ 17ನೇ ಮುಖ್ಯರಸ್ತೆಯಲ್ಲಿ ಬೆಸ್ಕಾಂ ಇಲಾಖೆ ವತಿಯಿಂದ ಯು.ಜಿ. ಕೇಬಲ್ ಅಳವಡಿಸಲು ರಸ್ತೆಯನ್ನು ಅಗೆದಿರುತ್ತಾರೆ. ಆದರೆ ಕೆಲಸದ ನಂತರ ಈವರೆವಿಗೂ ಸದರಿ ರಸ್ತೆಗಳಲ್ಲಿ ಅಗೆದಿರುವ ಭಾಗಗಳನ್ನು ರೆಸ್ಟೋರೇಷನ್ ಮಾಡಿರುವುದಿಲ್ಲ. ಇದರಿಂದಾಗಿ ಗುಂಡಿಗಳು ಮಾರ್ಪಾಡಾಗುತ್ತಿದ್ದು, ಈ ಬಗ್ಗೆ ಕಛೇರಿಗೆ ಹೆಚ್ಚಾಗಿ ದೂರುಗಳು ದಾಖಲಾಗಿರುವುದಾಗಿ ಸಭೆಯಲ್ಲಿ ದೂರಿದರು.
- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಬೆಸ್ಕಾಂ ಇಲಾಖೆ ವತಿಯಿಂದ ರಸ್ತೆಯನ್ನು ಅಗೆಯುವ ಮುನ್ನ ಸಂಭಂಧಿಸಿದ ಮಂಜೂರಾತಿ ಪತ್ರದೊಂದಿಗೆ ಬಿಬಿಎಂಪಿ ಅಧಿಕಾರಿಗಳಿಗೆ ಮಾಹಿತಿ ನೀಡಿ ನಂತರದಲ್ಲಿ ಕಾರ್ಯನಿರ್ವಹಿಸಬೇಕಾಗಿ ತಿಳಿಸಿ ಪತ್ರ ಬರೆಯುವಂತೆ ಕಾರ್ಯದರ್ಶಿ ರವರಿಗೆ ಸಭೆಯಲ್ಲಿ ತಿಳಿಸಿದರು.

ಮು.ತಿ.ನೋ.

Scanned by CamScanner

10. <u>ಪೊಲೀಸ್ ವಿಭಾಗದ ಬಗ್ಗೆ:-</u>

- ಕಿರ್ಲೋಸ್ಕರ್ ಕಾಲೋನಿ 3ನೇ ಹಂತದ 6ನೇ ಅಡ್ಡರಸ್ತೆಯಲ್ಲಿರುವ ಟ್ರಾನ್ಸ್‌ಫಾರ್ಮರ್ ಬಳಿಯಲ್ಲಿ ರಾತ್ರಿ ವೇಳೆಯಲ್ಲಿ ಕುಡುಕರ ಕಾಟ ಹೆಚ್ಚಾಗಿರುವುದಾಗಿ ಸಭೆಯಲ್ಲಿ ತಿಳಿಸಿದರು.
- ಸಭೆಯಲ್ಲಿ ಹಾಜರಿದ್ದ ಪೊಲೀಸ್ ಅಧಿಕಾರಿ ರವರು ಮಾತನಾಡುತ್ತಾ, ಅಂತಹ ಸಮಯದಲ್ಲಿ ಅಥವಾ ಯಾವುದೇ ತೊಂದರೆಯುಂಟಾದಲ್ಲಿ ಕೂಡಲೇ ದೂರವಾಣಿ ಸಂಖ್ಯೆ-112 ಗೆ ಸಂಪರ್ಕಿಸಿದಾಗ ಕೂಡಲೇ ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ ಪರಿಹರಿಸುವುದಾಗಿ ಸಭೆಯಲ್ಲಿ ತಿಳಿಸಿದರು.

ಮುಂದುವರೆದು, ಪ್ರತೀ ಸಭೆಯ ಸಭಾ ನಡವಳಿಗಳನ್ನು ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳಿಗೆ ತಲುಪುವಂತೆ ಮಾಡಲು ಕಾರ್ಯದರ್ಶಿ ರವರಿಗೆ ಸೂಚಿಸಿದರು. ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾ ನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಪಟ್ಟಿ ಮಾಡಿಕೊಂಡು, ಸದರಿ ದೂರುಗಳನ್ನು ಸರಿಪಡಿಸಿರುವ ಬಗ್ಗೆ ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಟಿಪ್ಪಣಿಯೊಂದಿಗೆ ದಾಖಲಾತಿಗಳನ್ನು ದೃಢೀಕರಿಸಿ ಕಡತದಲ್ಲಿ ತಪ್ಪದೇ **ಪ್ರತೀ ವಾರ್ಡ್ ಸಮಿತಿ ಸಭೆಯಲ್ಲಿ** ವರದಿ ಮಾಡಲು ಹಾಗೂ **ವಾರ್ಡ್ ಕಮಿಟಿ ವಾರ್ಡ್-75 ವಾಟ್ಸ್ ಆಪ್ ಗ್ರೂಪ್** ನಲ್ಲಿ ವರದಿ ಮಾಡಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯ ಗೊಳಿಸಲಾಯಿತು. ಕೊನೆಯಲ್ಲಿ ಕಾರ್ಯದರ್ಶಿಗಳು ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

ನೋಡಲ್ ಅಧಿಕಾರಿರವರ ಅನುಮೋದನೆ ಮೇರೆಗೆ )

10/11/2021.

ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 75

<u>ಪ್ರತಿಯನ್ನು:-</u>

1. ಮಾನ್ಯ ವಲಯ ವಿಶೇಷ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ತಾಂತ್ರಿಕ ಸಹಾಯಕರಿಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ವೈದ್ಯಕೀಯ ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

Scanned by CamScanner

ward committee meeting attendence dt- 08-11-2021.

| ಕ್ರ. ಸಂ. | ಹೆಸರು | ಪದನಾಮ | ಇಲಾಖೆ | ಮೊ. ಸಂ. | ಸಹಿ |
|---|---|---|---|---|---|
| 1) | N. Ramesh. | ಮಾರ್ಷಲ್ | B. B. M P | 9036862309 | [signature] |
| 2) | Dhanush A | Health Visitor | Health Deft | 9535510057 | [signature] |
| 3) | Keshavareddy P | P Kesa ASI | police | 9606244437 | [signature] |
| 4) | Basavaraj. B. Dasar | HC | police | 7411968150 | [signature] |
| 5) | Devaraj J.V. | | B.B.MP. | 7406961995 | [signature] |
| 6) | RAJESH | | MARSHAL | 8549916153 | [signature] |
| 7) | N. ಮಂಜುನಾಥ | ತ್ಯಾಜ್ಯ ಇಂಜಿನಿಯರ್ | BBMP | 9035642454 | [signature] |
| 8) | [illegible] | ಸಾರ್ಜಂಟ್ | B.B.M.P | 9945827015 | [signature] |
| 9) | S. LOKESH | Sr HI | BBMP | 9916332641. | [signature] |
| 10) | [illegible] | | | 9444824193 | [signature] |
| 11) | Shidrameshwar R.S | R.I. | BBMP | 9880040294 | [signature] |
| 12) | Sunilkumar | RI | BBMP | 9740368158 | [signature] |

Scanned by CamScanner

| ಕ್ರ. ಸಂ. | ಹೆಸರು | ಪದನಾಮ | ಇಲಾಖೆ | ಮೊ. ಸಂ. | ಸಹಿ |
|---|---|---|---|---|---|
| 13) | Girish-B | W.I | B.W.S.S.B | 9980065650 | [illegible] |
| 14) | | | | | |
| 15) | | | | | |
| 16) | | | | | |
| 17) | | | | | |
| 18) | | | | | |
| 19) | | | | | |
| 20) | | | | | |
| 21) | | | | | |
| 22) | | | | | |
| 23) | | | | | |
| 24) | | | | | |

Scanned by CamScanner